Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/46/2020–21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ–ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ;22
ಬೆಂಗಳೂರು – 560032.
ದಿನಾಂಕ: 19–03–2022

## ದಿನಾಂಕ; 19–03–2022 ರಂದು ವಾರ್ಡ್ ಸಮಿತಿ ಸಭೆಯ ನಡವಳಿಗಳು;–

- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಉದಯ್ ಚಂದನ್, ಕೆ.ಆರ್.ಡ್ಲ್ಯೂ.ಎ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ; 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ; 11–02–2022 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ. ಮುನಿರಾಮಣ್ಣ, ವಾರ್ಡ್ ಅಧ್ಯಕ್ಷರು ಮಾತನಾಡುತ್ತಾ, ವಾರ್ಡ್‌ನ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿ ಕಸ ವಿಂಗಡಣೆ ಸರಿಯಾಗಿ ಆಗದೇ ಇರುವುದರಿಂದ ಶೀಘ್ರವಾಗಿ ಅದನ್ನು ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಉದಯ್ ಚಂದನ್, ಕೆ.ಆರ್.ಡ್ಲ್ಯೂ.ಎ ಸದಸ್ಯರು ಮಾತನಾಡುತ್ತಾ, 1ನೇ 'ಎ' ಕ್ರಾಸ್ ಮತ್ತು 9ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ Street light ಹಾಳಾಗಿರುವುದರಿಂದ ಕೂಡಲೇ ಬೆಸ್ಕಾಂ ಇಲಾಖೆಗೆ ತಿಳಿಸಿ ಅದನ್ನು ಸರಿಪಡಿಸುವಂತೆ ತಿಳಿಸಿದರು.

Bruhat Bengaluru
Mahanagara Palike

- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, 10ನೇ 'ಎ' ಕ್ರಾಸ್ ಕನಕನಗರದಲ್ಲಿ ಆಟೋ ಮುಖಾಂತರ ಕಸದ ವಿಂಗಡಣೆ ಸರಿಯಾಗಿ ಆಗದೇ ಇರುವುದರಿಂದ ಶೀಘ್ರವಾಗಿ ಅದನ್ನು ಸರಿಪಡಿಸುವುದಾಗಿ ತಿಳಿಸಿದರು

- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರು ಮಿಶ್ರಿತ ಜಲ್ಲಿಕಲ್ಲುಗಳಿಂದ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಪ್ರಗತಿಯಲ್ಲಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡಿನಲ್ಲಿ ಕೋವಿಡ್ ವ್ಯಾಷಿನೇಶನ್ ಅನ್ನು 12 ವರ್ಷದಿಂದ 14 ವರ್ಷ ವರೆಗಿನ ಮಕ್ಕಳಿಗೆ ವ್ಯಾಷಿನೇಶನ್ ಹಾಕುತ್ತೀರುವ ಬಗ್ಗೆ ತಿಳಿಸಿದರು. ಅದರಂತೆ ಮೊದಲನೇ ಹಾಗೂ ಎರಡನೇ ಡೋಸ್ ತೆಗೆದುಕೊಂಡವರಿಗೆ ಬೂಸ್ಟರ್ ಡೋಸ್ ನೀಡುತ್ತೀರುವ ಬಗ್ಗೆ ತಿಳಿಸಿದರು. ಹಾಗೂ ವಾರ್ಡಿನಲ್ಲಿ ಯಾವುದೇ ಕೋವಿಡ್ +ve ಕೇಸ್‌ಗಳು ಇಲ್ಲವೆಂದು ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದವರಿಗೆ ಸರ್ಕಾರದಿಂದ ಕೋವಿಡ್ ಪರಿಹಾರ ನಿಧಿಗೆ ಸಾರ್ವಜನಿಕರು ಅರ್ಜಿಗಳನ್ನು ಸಲ್ಲಿಸುವ ಬಗ್ಗೆ ತಿಳಿಸಿದರು ಹಾಗೂ ಅದಕ್ಕೆ ಸಂಬಂಧಪಟ್ಟ ದಾಖಲಾತಿಗಳು ಮತ್ತು ಅದರ ಅನುಕೂಲತೆಗಳ ಬಗ್ಗೆ ಹಾಜರಿದ್ದ ಸದಸ್ಯರಿಗೆ ವಿವರಣೆ ನೀಡಿದರು.

- ಶ್ರೀಮತಿ ರೇಣು ರವಿ, ನಾಗರೀಕರು ಮಾತನಾಡುತ್ತಾ, ಸನ್ ರೈಸ್ ಕಾಲೋನಿ 1ನೇ ಕ್ರಾಸ್ ರಸ್ತೆಯಲ್ಲಿ ಅಡ್ಡಮೋರಿ ಹಾಳಾಗಿರುವುದರಿಂದ ಅದನ್ನು ಶೀಘ್ರವಾಗಿ ಸ್ವಚ್ಛಗೊಳಿಸುವಂತೆ ತಿಳಿಸಿದರು. ಹಾಗೂ ಕ್ರಾಸ್‌ನ ರಸ್ತೆಯಲ್ಲಿ ಕಾಂಕ್ರೀಟ್ ಗುಡ್ಡೆಗಳಿರುವುದರಿಂದ ಅದನ್ನು ತೆರವುಗೊಳಿಸುವಂತೆ ತಿಳಿಸಿದರು. ಈಗಾಗಲೇ ಕ್ರಾಸ್‌ನ ರಸ್ತೆಗಳನ್ನು ಸ್ವಚ್ಛಗೊಳಿಸಿರುವುದಾಗಿ ಸಹಾಯಕ ಅಭಿಯಂತರು ತಿಳಿಸಿದರು.

- ಶ್ರೀ ಕಾರ್ತಿಕ್, ನಾಗರೀಕರು ಮಾತನಾಡುತ್ತಾ, ಸನ್ ರೈಸ್ ಕಾಲೋನಿ Garbage point ಹತ್ತಿರ ಘನತ್ಯಾಜ್ಯದ ವಾಹನಗಳು ಅಲ್ಲಲ್ಲಿ ನಿಂತಿರುವುದರಿಂದ ರಸ್ತೆಯಲ್ಲಿ ಟ್ರಾಫಿಕ್ ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು, ಶೀಘ್ರವಾಗಿ ಅದನ್ನು ಸರಿಪಡಿಸುವಂತೆ ತಿಳಿಸಿದರು. ಈಗಾಗಲೇ ಸರಿಪಡಿಸಿರುವುದಾಗಿ ಸಭೆಗೆ ಹಾಜರಿದ್ದ ಸದಸ್ಯರಿಗೆ ತಿಳಿಸಿದರು.

- ಸನ್ ರೈಸ್ ಕಾಲೋನಿಯ ಮುಖ್ಯರಸ್ತೆಯಿಂದ Garbage point ಹತ್ತಿರದ ರಸ್ತೆ ವರೆಗೆ ಅಲ್ಲಲ್ಲಿ ಗುಂಡಿಗಳು ಬಿದ್ದಿರುವುದರಿಂದ ಅದನ್ನು ವೆಟ್ ಮಿಕ್ಸ್ ಅಥವಾ ಡಾಂಬರೀನಿಂದ ರಸ್ತೆಯ ಗುಂಡಿಯನ್ನು ಶೀಘ್ರವಾಗಿ ಮುಚ್ಚುವಂತೆ ತಿಳಿಸಿದರು. ಈಗಾಗಲೇ ಬಿದ್ದಿರುವ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರಿನಿಂದ ಗುಂಡಿಗಳನ್ನು ಮುಚ್ಚಿರುವುದಾಗಿ ತಿಳಿಸಿದರು.

- ಶ್ರೀ. ಉದಯ್ ಚಂದನ್, ಕೆ.ಆರ್.ಡ್ಬ್ಲ್ಯೂ.ಎ ಸದಸ್ಯರು ಮಾತನಾಡುತ್ತಾ, 10ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ ನೀರು ಸರಬರಾಜು ಸರಿಯಾಗಿ ಅಗದೇ ಇರುವುದರಿಂದ ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ ಶೀಘ್ರವಾಗಿ ಸರಿಯಾದ ರೀತಿಯಲ್ಲಿ ನೀರು ಸರಬರಾಜು ಮಾಡುವಂತೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12;45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಚರಣ್ ಸಿಂಗ್ ಚೌಹಾನ್)
ನೋಡೆಲ್ ಅಧಿಕಾರಿಗಳು
ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಹಾಗೂ
ಸಹಾಯಕ ಅಭಿಯಂತರರು ವಾರ್ಡ್ ನಂ:22